# ಕರ್ನಾಟಕ ಸರ್ಕಾರದ ನಡಾವಳಿಗಳು

ವಿಷಯ : "ಗೃಹ ಜ್ಯೋತಿ" ಯೋಜನೆಯಡಿ ಪ್ರತಿ ಮನೆಗೆ ಉಚಿತ ವಿದ್ಯುತ್ ಸೌಕರ್ಯ ಒದಗಿಸುವ ಬಗ್ಗೆ.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಎನರ್ಜಿ/154/ಪಿಎಸ್ಆರ್/2023, ದಿನಾಂಕ:20.05.2023.

**ಪ್ರಸ್ತಾವನೆ:**

ಮೂಲಭೂತ ಸೌಕರ್ಯಗಳಲ್ಲಿ ಒಂದಾದ ವಿದ್ಯುಚ್ಛಕ್ತಿಯನ್ನು ಉಚಿತವಾಗಿ ರಾಜ್ಯದ ನಾಗರೀಕರಿಗೆ ಒದಗಿಸಲು ದಿನಾಂಕ:20.05.2023 ರಂದು ನಡೆದ ಸಚಿವ ಸಂಪುಟದ ಸಭೆಯಲ್ಲಿ ಗೃಹ ಜ್ಯೋತಿ ಯೋಜನೆಯಡಿ ಉಚಿತ ವಿದ್ಯುತ್ ಒದಗಿಸಲು ತಾತ್ವಿಕ ಅನುಮೋದನೆ ನೀಡಿದೆ.

ಈ ಸಂಬಂಧ ಆಡಳಿತ ಇಲಾಖೆಯು ಸರ್ಕಾರದ ಆದೇಶ ಸಂಖ್ಯೆ: ಎನರ್ಜಿ/154/ಪಿಎಸ್ಆರ್/2023 ದಿನಾಂಕ:20.05.2023 ಅನ್ನು ಹೊರಡಿಸಿದ್ದು, ಸದರಿ ಆದೇಶದಲ್ಲಿ ಗೃಹ ಜ್ಯೋತಿ ಯೋಜನೆಯನ್ನು ಅನುಷ್ಠಾನಗೊಳಿಸಲು ಅನುಸರಿಸಬೇಕಾದ ಕಾರ್ಯವಿಧಾನ ಮತ್ತು ಪಾಲಿಸಬೇಕಾದ ಷರತ್ತು ಮತ್ತು ನಿಬಂಧನೆಗಳ ಬಗ್ಗೆ ಸರ್ಕಾರದಿಂದ ಪ್ರತ್ಯೇಕವಾಗಿ ಆದೇಶ ಹೊರಡಿಸಲಾಗುವುದೆಂದು ತಿಳಿಸಿದೆ.

ದಿನಾಂಕ:02.06.2023 ರಂದು ನಡೆದ ಸಚಿವ ಸಂಪುಟದ ಸಭೆಯಲ್ಲಿ 'ಗೃಹ ಜ್ಯೋತಿ" ಯೋಜನೆಯನ್ನು ಅನುಷ್ಠಾನಗೊಳಿಸುವ ಬಗ್ಗೆ ವಿಷಯ ಮಂಡನೆಯಾಗಿರುತ್ತದೆ. 'ಗೃಹ ಜ್ಯೋತಿ" ಯೋಜನೆಯಡಿ ರಾಜ್ಯದಲ್ಲಿನ ಪ್ರತಿ ಮನೆಗೆ ಪ್ರತಿ ತಿಂಗಳಿಗೆ ಗರಿಷ್ಠ 200 ಯೂನಿಟ್‌ಗಳವರೆಗಿನ ಬಳಕೆಯ ಮಿತಿಯಲ್ಲಿ ಪ್ರತಿ ಗ್ರಾಹಕರ ಮಾಸಿಕ ಸರಾಸರಿ ಬಳಕೆಯ (ಆರ್ಥಿಕ ವರ್ಷ 2022-23ರ ಬಳಕೆಯ ಆಧಾರದನ್ವಯ) ಯೂನಿಟ್‌ಗಳ ಮೇಲೆ ಶೇಕಡ 10 ರಷ್ಟು ಹೆಚ್ಚಿನ ವಿದ್ಯುತ್ ಬಳಕೆಯ ಮಿತಿಯನ್ನು ಅನುಮತಿಸಿ, ಅದಕ್ಕನುಗುಣವಾಗಿ ವಿದ್ಯುತ್ ಬಿಲ್ಲಿನ ಮೊತ್ತವನ್ನು ಉಚಿತವಾಗಿ ಒದಗಿಸಲು ಹಾಗೂ 200 ಯೂನಿಟ್‌ಗಳ ಬಳಕೆಯನ್ನು ಮೀರಿದ ಗ್ರಾಹಕರು ಪೂರ್ಣ ವಿದ್ಯುತ್ ಬಿಲ್ಲನ್ನು ಪಾವತಿಸಲು ಸಂಪುಟ ಸಭೆಯು ಅನುಮೋದಿಸಿದೆ.

ಸದರಿ ಯೋಜನೆಯ ಅನುಷ್ಠಾನಕ್ಕೆ ಸಂಬಂಧಿಸಿದ ಸಹಾಯಧನ ಮೊತ್ತವನ್ನು ಹಾಗೂ ಮುಂದಿನ ಮಾಹೆಗಳಲ್ಲಿ ನಿಗದಿಯಾಗುವ ಇಂಧನ ಮತ್ತು ವಿದ್ಯುತ್ ಖರೀದಿ ವೆಚ್ಚದ ಹೊಂದಾಣಿಕೆ ಶುಲ್ಕ (FPPCA - Fuel and Power Purchase Cost Adjustment) ದರಕ್ಕೆ ಸಂಬಂಧಿಸಿದ ಸಹಾಯಧನವನ್ನು ಒಳಗೊಂಡಂತೆ ಒಟ್ಟು ಸಹಾಯಧನವನ್ನು ವಿದ್ಯುತ್ ಸರಬರಾಜು ಕಂಪನಿಗಳಿಗೆ ಸರ್ಕಾರದಿಂದ ಮುಂಗಡವಾಗಿ ಒದಗಿಸಲಾಗುವುದು.

ಪ್ರಸ್ತುತ ಚಾಲ್ತಿಯಲ್ಲಿರುವ **ಭಾಗ್ಯ ಜ್ಯೋತಿ / ಕುಟೀರ ಜ್ಯೋತಿ ಯೋಜನೆ ಮತ್ತು ಅಮೃತ ಜ್ಯೋತಿ ಯೋಜನೆಯಡಿಯ** ಫಲಾನುಭವಿಗಳನ್ನು ಗೃಹ ಜ್ಯೋತಿ ಯೋಜನೆಯಡಿಯಲ್ಲಿ ಸೇರ್ಪಡೆಗೊಳಿಸಲಾಗಿದೆ. ಆದ್ದರಿಂದ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಎನರ್ಜಿ/164/ಪಿಎಸ್‌ಆರ್/2023**

**ದಿನಾಂಕ: 05.06.2023, ಬೆಂಗಳೂರು**

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ, "ಗೃಹ ಜ್ಯೋತಿ" ಯೋಜನೆಯಡಿ ರಾಜ್ಯದಲ್ಲಿನ ಪ್ರತಿ ಮನೆಗೆ ಪ್ರತಿ ತಿಂಗಳಿಗೆ ಗರಿಷ್ಠ 200 ಯೂನಿಟ್‌ಗಳವರೆಗಿನ ಬಳಕೆಯ ಮಿತಿಯಲ್ಲಿ ಪ್ರತಿ ಗ್ರಾಹಕರ ಮಾಸಿಕ ಸರಾಸರಿ ಬಳಕೆಯ (ಆರ್ಥಿಕ ವರ್ಷ 2022-23ರ ಬಳಕೆಯ ಆಧಾರದನ್ವಯ) ಯೂನಿಟ್‌ಗಳ ಮೇಲೆ ಶೇ.10ರಷ್ಟು ಹೆಚ್ಚಿನ ಬಳಕೆಯ ಮಿತಿಯನ್ನು ಅನುಮತಿಸಿ, ಅದಕ್ಕನುಗುಣವಾಗಿ ವಿದ್ಯುತ್ ಬಿಲ್ಲಿನ ಮೊತ್ತವನ್ನು ಉಚಿತವಾಗಿ ಒದಗಿಸಲು; ಹಾಗೂ 200 ಯೂನಿಟ್‌ಗಳ ಬಳಕೆಯನ್ನು ಮೀರಿದ ಗ್ರಾಹಕರು ಪೂರ್ಣ ವಿದ್ಯುತ್ ಬಿಲ್ಲನ್ನು ಪಾವತಿಸಲು ಸರ್ಕಾರವು ಆಡಳಿತಾತ್ಮಕ ಅನುಮೋದನೆ ನೀಡಿದೆ.

ಈ ಯೋಜನೆಯನ್ನು ಜುಲೈ 2023ರ ತಿಂಗಳ ವಿದ್ಯುತ್ ಬಳಕೆಗೆ ಆಗಸ್ಟ್ 2023ರ ತಿಂಗಳಿಂದ ನೀಡುವ ಬಿಲ್ಲಿಗೆ ಅನ್ವಯವಾಗುವಂತೆ ಈ ಕೆಳಕಂಡ ಷರತ್ತುಗಳೊಂದಿಗೆ ಜಾರಿಗೆ ತರಲು ಆದೇಶಿಸಿದೆ.

1. ಈ ಯೋಜನೆಯು ಗೃಹ ಬಳಕೆಯ ವಿದ್ಯುತ್ ಸಂಪರ್ಕಗಳಿಗೆ ಮಾತ್ರ ಅನ್ವಯವಾಗುತ್ತದೆ; ವಾಣಿಜ್ಯ ಉದ್ದೇಶಗಳಿಗೆ ವಿದ್ಯುತ್ ಉಪಯೋಗಿಸಿದಲ್ಲಿ ಅನ್ವಯವಾಗುವುದಿಲ್ಲ.
2. ಪ್ರತಿ ತಿಂಗಳ ಮಿಟರ್ ರೀಡಿಂಗ್ ಮಾಡಿದಾಗ, ಒಟ್ಟು ವಿದ್ಯುತ್ ಬಳಕೆಯ ಪ್ರಮಾಣಕ್ಕೆ ಬಿಲ್ಲನ್ನು ನಮೂದಿಸುವುದು.
3. ಗೃಹ ವಿದ್ಯುತ್ ಬಳಕೆದಾರನ ಅರ್ಹ ಮೊತ್ತವನ್ನು ಬಿಲ್‌ನಲ್ಲಿ ಕಡಿತಗೊಳಿಸಿ, ಉಳಿದ ಮೊತ್ತವನ್ನು ಗ್ರಾಹಕರಿಗೆ net bill ನೀಡುವುದು ಹಾಗೂ ಗ್ರಾಹಕರು net bill ನ್ನು ಪಾವತಿಸುವುದು.
4. ಅರ್ಹ ಯೂನಿಟ್ / ಮೊತ್ತಕ್ಕಿಂತ ಒಳಗೆ ಬಿಲ್ ಆಗಿದ್ದಲ್ಲಿ ಅಂತಹ ಗ್ರಾಹಕರಿಗೆ ಶೂನ್ಯ ಬಿಲ್ಲನ್ನು ನೀಡಲಾಗುವುದು.
5. ಈ ಯೋಜನೆಯಡಿ ಸೌಲಭ್ಯ ಪಡೆಯಲು ಇಚ್ಚಿಸುವ ಗ್ರಾಹಕರು ಸೇವಾ ಸಿಂಧು ಪೋರ್ಟಲ್ ಮೂಲಕ ಅರ್ಜಿ ಸಲ್ಲಿಸುವುದು.
6. ಪ್ರತಿ ಫಲಾನುಭವಿಯು ತನ್ನ Customer ID / Account ID ಅನ್ನು ಆಧಾರ್‌ಗೆ ಕಡ್ಡಾಯವಾಗಿ ಜೋಡಣೆ ಮಾಡುವುದು.
7. ಪ್ರಸ್ತುತ ಚಾಲ್ತಿಯಲ್ಲಿರುವ **ಭಾಗ್ಯ ಜ್ಯೋತಿ / ಕುಟೀರ ಜ್ಯೋತಿ ಯೋಜನೆ ಮತ್ತು ಅಮೃತ ಜ್ಯೋತಿ ಯೋಜನೆಯ** ಫಲಾನುಭವಿ ಗ್ರಾಹಕರುಗಳನ್ನು ಗೃಹ ಜ್ಯೋತಿ ಯೋಜನೆಯಡಿಯಲ್ಲಿ ಸೇರ್ಪಡಿಸುವುದು.

8. ದಿನಾಂಕ 30.06.2023ರ ಅಂತ್ಯಕ್ಕೆ (ಜೂನ್ 2023ರ ಮಾಹೆಯಲ್ಲಿ ಬಳಸಿದ ವಿದ್ಯುತ್ ಪ್ರಮಾಣಕ್ಕೆ ಜುಲೈ 2023ರಲ್ಲಿ ವಿತರಿಸಿದ ಬಿಲ್ಲಿನ ಮೊತ್ತ ಒಳಗೊಂಡಂತೆ) ಬಾಕಿ ಇರುವ ವಿದ್ಯುತ್ ಶುಲ್ಕದ ಬಾಕಿ ಮೊತ್ತವನ್ನು 3 ತಿಂಗಳೊಳಗೆ ಪಾವತಿಸತಕ್ಕದ್ದು. ಬಾಕಿ ಮೊತ್ತವನ್ನು ನಿಗಧಿತ ಅವಧಿಯೊಳಗೆ ಪಾವತಿಸದಿದ್ದಲ್ಲಿ ಅಂತಹ ಗ್ರಾಹಕರ ವಿದ್ಯುತ್ ಸ್ಥಾವರಗಳ ಸಂಪರ್ಕವನ್ನು ಕಡಿತಗೊಳಿಸಲಾಗುವುದು.

9. ಗೃಹ ವಿದ್ಯುತ್ ಗ್ರಾಹಕರ ಸ್ಥಾವರಗಳಿಗೆ ಮಾಪಕವನ್ನು ಅಳವಡಿಸುವುದು ಹಾಗೂ ಮಾಪಕ ಓದುವುದು ಕಡ್ಡಾಯವಾಗಿರುತ್ತದೆ.

10. ಗೃಹ ವಿದ್ಯುತ್ ಬಳಕೆದಾರರ ಹೆಸರಿನಲ್ಲಿ ಒಂದಕ್ಕಿಂತ ಹೆಚ್ಚು ಸ್ಥಾವರಗಳಿದ್ದಲ್ಲಿ, ಒಂದು ಸ್ಥಾವರಕ್ಕೆ ಮಾತ್ರ ಈ ಯೋಜನೆಯಡಿಯ ಸೌಲಭ್ಯಕ್ಕೆ ಅರ್ಹರಾಗುವರು.

ಗ್ರಾಹಕನಿಗೆ ನೀಡಿದ ಉಚಿತ ಮೊತ್ತವನ್ನು ಸರ್ಕಾರದಿಂದ ವಿದ್ಯುತ್ ಸರಬರಾಜು ಕಂಪನಿಗಳಿಗೆ ಸಹಾಯಧನದ ಮೂಲಕ ಪಾವತಿಸಲಾಗುವುದು.

ಈ ಆದೇಶವನ್ನು ಸಚಿವ ಸಂಪುಟದ ನಿರ್ಣಯ ಸಂ.ಸಿ.321/2023, ದಿನಾಂಕ:02.06.2023ರನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ವಿನೋದ್ ಕುಮಾರ್ ಡಿ.ಎಂ)
ಸರ್ಕಾರದ ಅಧೀನ ಕಾರ್ಯದರ್ಶಿ
ಇಂಧನ ಇಲಾಖೆ.

**ಇವರಿಗೆ:**

ಸಂಕಲನಕಾರರು, ಸರ್ಕಾರಿ ಮುದ್ರಣಾಲಯ, ಬೆಂಗಳೂರು, ಇವರಿಗೆ ಪ್ರಕಟಣೆಗಾಗಿ.

**ಪ್ರತಿಗಳು:**

1. ಮಹಾಲೇಖಪಾಲರು(ಎ&ಇ)/(ಲೆಕ್ಕಪರಿಶೋಧನೆ-1&ಲೆಕ್ಕಪರಿಶೋಧನೆ-2)ಕರ್ನಾಟಕ, ಬೆಂಗಳೂರು-1.
2. ಸರ್ಕಾರದ ಮುಖ್ಯ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಯೋಜನಾ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು
5. ಮಾನ್ಯ ಮುಖ್ಯಮಂತ್ರಿಗಳ ಅಪರ ಮುಖ್ಯ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
6. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ವಿಕಾಸ ಸೌಧ, ಬೆಂಗಳೂರು.
7. ವ್ಯವಸ್ಥಾಪಕ ನಿರ್ದೇಶಕರು, ಕವಿಪ್ರನಿನಿ / ಕವಿನಿನಿ / ಬೆವಿಕಂ / ಮವಿಕಂ / ಹುವಿಕಂ / ಗುವಿಕಂ / ಚಾವಿಸನಿನಿ / ಹುಕ್ಕೇರಿ.
8. ಮಾನ್ಯ ಉಪಮುಖ್ಯಮಂತ್ರಿಗಳ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
9. ಮಾನ್ಯ ಇಂಧನ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
10. ಕಾರ್ಯದರ್ಶಿ, ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗ, #16, ಸಿ-1, ಮಿಲ್ಲರ್ಸ್ ಬೆಡ್ ಏರಿಯಾ, ವಸಂತನಗರ, ಬೆಂಗಳೂರು-52.